ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ದೇವನಹಳ್ಳಿ ತಾಲ್ಲೂಕಿನ ಬಗರ್ಹುಕುಂ ಸಾಗುವಳಿದಾರರ
ಭೂಸ್ವಾಧೀನ ಕುರಿತು

ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :-

358 (427) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಸ್ಥಾಪಿಸಲು ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೇವನಹಳ್ಳಿ ತಾಲ್ಲೂಕು, ದೇವನಹಳ್ಳಿ ಕಸಬಾ ಹೋಬಳಿ ಮತ್ತು ಇತರೆ ಗ್ರಾಮಗಳಲ್ಲಿ ಬರುವ ಬಗರ್ಹುಕುಂ ಸಾಗುವಳಿ ಜಮೀನುಗಳನ್ನು ವಶಪಡಿಸಿಕೊಂಡು ಉಪಯೋಗಿಸಲಾಗಿದೆಯೇ ;

(ಆ) ಹಾಗಿದ್ದರೆ, ಎಷ್ಟು ಪ್ರದೇಶದ (ಎಕರೆ) ಜಮೀನನ್ನು ವಶಪಡಿಸಿಕೊಳ್ಳಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ವಶಪಡಿಸಿಕೊಂಡ ಬಗರ್ಹುಕುಂ ಸಾಗುವಳಿ ಜಮೀನಿಗೆ ಭೂ ಸ್ವಾಧೀನ ಪರಿಹಾರ ನೀಡಲಾಗಿದೆಯೇ ; (ಮಾಹಿತಿ ನೀಡುವುದು)

(ಈ) ಸದರಿ ನಿಲ್ದಾಣದ ನಿರ್ಮಾಣಕ್ಕೆ ವಶಪಡಿಸಿಕೊಂಡ ಬಗರ್ಹುಕುಂ ಸಾಗುವಳಿದಾರರು ಕರ್ನಾಟಕ ಉಚ್ಚನ್ಯಾಯಾಲಯದ ಮೊರೆ ಹೋಗಿ ಸರ್ಕಾರದ ವಿರುದ್ಧ ಯಾವುದಾದರೂ ಆದೇಶಗಳನ್ನು ಪಡೆದಿರುತ್ತಾರೆಯೇ ; (ವಿವರವಾದ ಮಾಹಿತಿ ನೀಡುವುದು)

(ಉ) ಪಡೆದಿದ್ದಲ್ಲಿ, ಕಂದಾಯ ಇಲಾಖೆ ಅಥವಾ ಅನ್ಯ ಇಲಾಖೆಗಳಿಂದ ನ್ಯಾಯಾಲಯದ ಆದೇಶದ ಪ್ರಕಾರ ಇಲ್ಲಿಯವರೆಗೆ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ? (ಸಂಪೂರ್ಣ ವಿವರ ನೀಡುವುದು)